ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 15–12–2020

# ಮಾಧ್ಯಮ ಆಮಂತ್ರಣ

**1) ವಿಜಯ್ ದಿವಸ್ ಆಚರಣೆ : (1971 ರಲ್ಲಿ ನಡೆದ ಇಂಡೋ–ಪಾಕ್ ಯುದ್ದದಲ್ಲಿ ಜಯವನ್ನು ತಂದು ಕೊಡಲು ದೇಶಕ್ಕಾಗಿ ಪ್ರಾಣತೆತ್ತ ವೀರ ಯೋಧರ/ಹುತಾತ್ಮರ ಸ್ಮರಣೆ)**

**ಮುಖ್ಯ ಅತಿಥಿಗಳು :**

**ಬಿ. ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**

**ಬಸವರಾಜ ಬೊಮ್ಮಾಯಿ, ಗೃಹ ಸಚಿವರು, ಕರ್ನಾಟಕ ಸಕಾರ**

**ದಿನಾಂಕ : 16–12–2020 ಬುಧವಾರ ಸಮಯ : ಬೆಳಿಗ್ಗೆ 09–15 ಗಂಟೆಗೆ**

**ಸ್ಥಳ : ರಾಷ್ಟ್ರೀಯ ಮಿಲಿಟರಿ ಸ್ಮಾರಕ ಶ್ರೀಮತಿ ಇಂದಿರಾಗಾಂಧಿ ಸಂಗೀತ ಕಾರಂಜಿ ಉದ್ಯಾನವನ ಹತ್ತಿರ, ಚೌಡಯ್ಯ ರಸ್ತೆ, ನೆಹರು ತಾರಾಲಯ ಎದುರು, ರಾಜಭವನದ ಹತ್ತಿರ, ಬೆಂಗಳೂರು –01**

# ಪತ್ರಿಕಾ ಪ್ರಕಟಣೆ

## ಲಘು ವಾಹನ ಚಾಲನಾ ಬ್ಯಾಡ್ಜ್ ಸಂಖ್ಯೆ ಪಡೆಯಲು ಅವಕಾಶ

**ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) :**

ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಅನುಸಾರ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಮಂತ್ರಾಲಯ, ನವದೆಹಲಿ ರವರು ರಾಜ್ಯಗಳಿಗೆ ಬರೆದ ಪತ್ರದಲ್ಲಿ ಲಘು ಮೋಟಾರು ವಾಹನ ವರ್ಗದ ಚಾಲನಾ ಅನುಜ್ಞಾ ಪತ್ರ ಹೊಂದಿರುವ ಅಭ್ಯರ್ಥಿಗಳು ಸಾರಿಗೆ ಮತ್ತು ಸಾರಿಗೇತರ ವರ್ಗದ ಎಲ್ಲಾ ಲಘು ಮೋಟಾರು ವಾಹನಗಳನ್ನು (7,500 kg ಮೀರದ) ಚಲಾಯಿಸಬಹುದು ಎಂದು ತಿಳಿಸಿರುತ್ತಾರೆ. ಆದ್ದರಿಂದ ಚಾಲನಾ ಅನುಜ್ಞಾ ಪತ್ರಕ್ಕೆ ಅರ್ಜಿ ಸಲ್ಲಿಸಲು ನಮೂನೆ-2 ನ್ನು ಅನುಷ್ಠಾನಕ್ಕೆ ತಂದ ನಂತರ ಬ್ಯಾಡ್ಜ್ ಸಂಖ್ಯೆ ಚಾಲನಾ ಅನುಜ್ಞಾ ಪತ್ರದಲ್ಲಿ ನಮೂದಾಗುತ್ತಿರಲಿಲ್ಲ. ಆದರೆ ಕರ್ನಾಟಕ ಮೋಟಾರು ವಾಹನ ನಿಯಮ, 12 ರನ್ವಯ ಆಟೋರಿಕ್ಷಾ ಕ್ಯಾಬ್, ಮೋಟಾರು ಕ್ಯಾಬ್ ವಾಹನಗಳನ್ನು ಚಲಾಯಿಸುವ ವಾಹನ ಚಾಲಕರು ಬ್ಯಾಡ್ಜ್ ಅನ್ನು ಪಡೆದು ಸಾರಿಗೆ ವಾಹನಗಳನ್ನು ಚಲಾಯಿಸಬಹುದಾಗಿರುತ್ತದೆ.

ಈ ಹಿನ್ನಲೆಯಲ್ಲಿ ವಾಹನ ಚಾಲಕರಿಗೆ ಬ್ಯಾಡ್ಜ್ ಸಂಖ್ಯೆ ನೀಡುವುದನ್ನು ಮುಂದುವರಿಸುವುದು ಅವಶ್ಯಕವಾಗಿರುವುದನ್ನು ಮನಗಂಡು, ದಿನಾಂಕ:13-10-2020 ರಿಂದ ರಾಜ್ಯದ ಎಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಆಟೋರಿಕ್ಷಾ ಕ್ಯಾಬ್, ಮೋಟಾರು ಕ್ಯಾಬ್ ವಾಹನಗಳನ್ನು ಚಲಾಯಿಸುವ ವಾಹನ ಚಾಲಕರು ಚಾಲನಾ ಅನುಜ್ಞಾ ಪತ್ರದಲ್ಲಿ ಬ್ಯಾಡ್ಜ್ ಸಂಖ್ಯೆ ಅನ್ನು ಪಡೆಯಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## <u>ಸರ್ಕಾರದ ಅನುದಾನ ಪಡೆಯುವ ಸಂಸ್ಥೆಗಳು</u><br><u>ಮಾಹಿತಿ ಹಕ್ಕು ಅಧಿನಿಯಮದ ವ್ಯಾಪ್ತಿಗೊಳಪಡುತ್ತವೆ :</u><br><u>ಕರ್ನಾಟಕ ಮಾಹಿತಿ ಆಯೋಗದ ಸ್ಪಷ್ಟನೆ</u>

ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) :

ಸರ್ಕಾರದ ಅನುದಾನ ಪಡೆಯುವ ಸಂಸ್ಥೆಗಳು ಮಾಹಿತಿ ಹಕ್ಕು ಅಧಿನಿಯಮ–2005 ರ ವ್ಯಾಪ್ತಿಗೆ ಒಳಪಡುತ್ತದೆ. ಎಂದು ಕರ್ನಾಟಕ ಮಾಹಿತಿ ಹಕ್ಕು ಆಯೋಗವು ಸ್ಪಷ್ಟಪಡಿಸಿದೆ.

ನಗರದ ಸೇಂಟ್ ಜೋಸೆಫ್ ಸಂಜೆ ಕಾಲೇಜು ಸೇಂಟ್ ಜೋಸೆಫ್ ಕಲಾ ಮತ್ತು ವಿಜ್ಞಾನ ಕಾಲೇಜು ಮತ್ತು ಸೇಂಟ್ ಜೋಸೆಫ್ ವಾಣಿಜ್ಯ ಕಾಲೇಜುಗಳು ಸರ್ಕಾರದ ಅನುದಾನ ಪಡೆಯುತ್ತಿವೆ. ಸರ್ಕಾರದ ಅನುದಾನವು ಸಾರ್ವಜನಿಕರ ತೆರಿಗೆ ಹಣವಾಗಿರುವ ಹಿನ್ನೆಲೆಯುಲ್ಲಿ ಅನುದಾನ ಪಡೆಯುವ ಸಂಸ್ಥೆಗಳು ಮಾಹಿತಿ ಹಕ್ಕು ಅಧಿನಿಯಮದ ವ್ಯಾಪ್ತಿಗೆ ಒಳಪಡುತ್ತದೆ ಎಂದು ಕರ್ನಾಟಕ ಮಾಹಿತಿ ಆಯೋಗ ಪುನರುಚ್ಛರಿಸಿದೆ.

ಮಾಹಿತಿ ಹಕ್ಕು ಅಧಿನಿಯಮ-2005 ರ ಅಡಿಯಲ್ಲಿ ಮಾಹಿತಿ ನೀಡುವಂತೆ ಕೋರಿ ಸಲ್ಲಿಸಿದ ಅರ್ಜಿಯನ್ನು ಈ ಕಾಲೇಜುಗಳು ತಿರಸ್ಕರಿಸಿ ಮಾಹಿತಿ ನೀಡದ ಹಿನ್ನೆಲೆಯಲ್ಲಿ ಸುಧಾ ಕಟ್ವಾ ಎಂಬುವವರು ಕರ್ನಾಟಕ ಮಾಹಿತಿ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ಈ ಪ್ರಕರಣವನ್ನು ಗಂಭಿರವಾಗಿ ಪರಿಗಣಿಸಿದ ಆಯೋಗವು ಸ್ಪಷ್ಟನೆ ನೀಡಿದೆಯಲ್ಲದೆ, ಅರ್ಜಿದಾರರು ಕೋರಿರುವ ಮಾಹಿತಿಯನ್ನು 30 ದಿನಗಳೊಳಗೆ ನೀಡುವಂತೆ ಈ ಮೂರೂ ಶಿಕ್ಷಣ ಸಂಸ್ಥೆಗಳಿಗೆ ಸೂಚಿಸಿದೆ. ಅಲ್ಲದೆ, ಮಾಹಿತಿ ನೀಡಲು ನಿರಾಕರಿಸಿದ ಈ ಮೂರು ಕಾಲೇಜುಗಳಿಗೆ ತಲಾ 25,000 ರೂ. ದಂಡವನ್ನು ಏಕೆ ವಿಧಿಸಬಾರದು ? ಎಂದು ಪ್ರಶ್ನಿಸಿದೆ. ಅಂತೆಯೇ, ಮುಂದಿನ ಜನವರಿ 13 ರ ವಿಚಾರಣೆ ವೇಳೆ ಹಾಜರಿರಲು ಆದೇಶಿಸಿದೆ ಎಂದು ರಾಜ್ಯ ಮಾಹಿತಿ ಆಯುಕ್ತ ಎನ್ ಪಿ ರಮೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗ್ನಿಶಾಮಕ ಇಲಾಖೆಯಲ್ಲಿ ಡಿಸೆಂಬರ್ 20ರ ವರೆಗೆ ಸಕಾಲ ಸಪ್ತಾಹ

ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) : ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯಲ್ಲಿ ಐದು ಸೇವೆಗಳನ್ನು ಸಕಾಲ ವ್ಯಾಪ್ತಿಯಲ್ಲಿ ತಂದಿದ್ದು, ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಡಿಸೆಂಬರ್ 20ರ ವರೆಗೆ ಸಕಾಲ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದೆ.

ಹೊಸ ಅರ್ಜಿಗಳನ್ನು ಸಕಾಲದಲ್ಲಿ ಸ್ವೀಕರಿಸಿ, ನಿಗಧಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗುವುದು. ಸಪ್ತಾಹದ ಅಂತ್ಯದಲ್ಲಿ ವಿಲೇವಾರಿ ಮಾಡಲಾದ ಅರ್ಜಿಗಳ ಕುರಿತು ಸಕಾಲ ಮಿಷನ್‌ಗೆ ವರದಿ ನೀಡಲಾಗುತ್ತದೆ.

ಅಗ್ನಿ ಶಾಮಕ ಇಲಾಖೆಯಲ್ಲಿನ ಐದು ಸೇವೆಗಳಾದ ಬಹುಮಹಡಿ ಕಟ್ಟಡಗಳಿಗೆ ನಿರ್ಮಾಣ ಪೂರ್ವದಲ್ಲಿ ನೀಡಲಾಗುವ ನಿರಾಕ್ಷೇಪಣಾ ಪ್ರಮಾಣ ಪತ್ರ. ಬಹುಮಹಡಿ ಕಟ್ಟಡಗಳಿಗೆ ನಿರ್ಮಾಣದ ನಂತರದಲ್ಲಿ ನೀಡಲಾಗುವ ಕ್ಲಿಯರೆನ್ಸ್ ಪ್ರಮಾಣ ಪತ್ರ. ಬೆಂಕಿ ಆಕಸ್ಮಿಕದ ತುರ್ತು ಕರೆಗೆ ಪ್ರತಿಕ್ರಿಯೆ, ಅಪಘಾತ ನೈಸರ್ಗಿಕ ವಿಪತ್ತು, ರಕ್ಷಣಾ ಕಾರ್ಯ ಮತ್ತು ವಿಪತ್ತು ನಿರ್ವಹಣೆಯ ತುರ್ತು ಕರೆಗಳಿಗೆ ಪ್ರತಿಕ್ರಿಯೆ ಮತ್ತು ಪಟಾಕಿಗಳ ಲೈಸನ್ಸ್‌ಗಾಗಿ ನಿರಾಕ್ಷೇಪಣಾ ಪತ್ರವನ್ನು ಸಕಾಲದಡಿಯಲ್ಲಿ ನೀಡಲು ಸಂಯೋಜಿತಗೊಂಡಿರುತ್ತವೆ. ಸಂಯೋಜಿತಗೊಂಡಿರುವ ಸೇವೆಗಳನ್ನು ಸಾರ್ವಜನಿಕರು https://sevasindhu.karnataka.gov.in ವೆಬ್‌ಸೈಟ್‌ನಿಂದ ಪಡೆಯಬಹುದು.

ಸಾರ್ವಜನಿಕರು ಇವುಗಳನ್ನು ಸದುಪಯೋಗ ಪಡೆದುಕೊಳ್ಳುವಂತೆ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಪೊಲೀಸ್ ಮಹಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಪಂಚಾಯತ್ ಚುನಾವಣೆ: ನಾಮಪತ್ರ ಹಿಂಪಡೆಯುತ್ತಿದ್ದಲ್ಲಿ ಕ್ರಮ

**ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) :**

ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ರ ನಾಮಪತ್ರ ಸಲ್ಲಿಸುವ ಪ್ರಕ್ರಿಯೆಯಲ್ಲಿ ಹರಾಜು ಪ್ರಕರಣಗಳು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ಹಿನ್ನೆಲೆಯಲ್ಲಿ ಆಯುಕ್ತರು ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಸ್ಪರ್ಧಿಸುವ ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯುತ್ತಿದ್ದಲ್ಲಿ ಅವರುಗಳು ಯಾವುದೇ ಒತ್ತಡ, ಅಮಿಶಗಳಿಗೆ ಒಳಗಾಗದೆ ನ್ಯಾಯಯುತವಾಗಿ ಹಾಗೂ ಕ್ರಮವಾಗಿ ಹಿಂಪಡೆಯುತ್ತಿರುವವರೇ ಎಂಬ ಬಗ್ಗೆ ಖಾತ್ರಿಪಡಿಸಿಕೊಳ್ಳುವಂತೆ ಸೂಚಿಸಿದ್ದಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಚುನಾವಣೆ ನಡೆಸುವ) ನಿಯಮಗಳು ರೀತ್ಯ ಉಮೇದುವಾರಿಕೆಯನ್ನು ಅಭ್ಯರ್ಥಿಯು ಖುದ್ದಾಗಲೀ ಅಥವಾ ಅವನ ಸೂಚಕನ ಮೂಲಕವಾಗಲೀ, ಅಥವಾ ಅಂಥ ಅಭ್ಯರ್ಥಿಯಿಂದ ಇದಕ್ಕಾಗಿ ಅಧಿಕೃತಗೊಳಿಸಲಾದ ಏಜೆಂಟ್ ಮೂಲಕವಾಗಲೀ ಹಿಂತೆಗೆದುಕೊಳ್ಳಲು ಅವಕಾಶವಿರುತ್ತದೆ. ಈ ಸಂದರ್ಭದಲ್ಲಿ ಹಿಂತೆಗೆದುಕೊಳ್ಳುವ ನೋಟೀಸನ್ನು ಅಭ್ಯರ್ಥಿಯು ಯಾವುದೇ ಒತ್ತಡವಿಲ್ಲದೇ ಸ್ವಇಚ್ಛೆಯಿಂದ ನೀಡುತ್ತಿರುವ ಹಾಗೂ ನೈಜತೆಯ ಬಗ್ಗೆ ತೃಪ್ತಿಯಾದ ಮೇಲೆ ಅಂಗೀಕರಿಸುವಂತೆ ಚುನಾವಣಾಧಿಕಾರಿಗಳಿಗೆ ಸೂಕ್ತ ಸೂಚನೆಯನ್ನು ನೀಡುವಂತೆಯೂ ಹಾಗೂ ಅವಿರೋಧವಾಗಿ ಆಯ್ಕೆಯಾಗುವ ಪ್ರಕರಣಗಳನ್ನು ಒಮ್ಮೆ ಪರಿಶೀಲಿಸಿ ಕ್ರಮವಹಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) :**

ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ. ಗೋಪಾಲಯ್ಯ ಅವರು ಡಿಸೆಂಬರ್ 16 ರವರೆಗೆ ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ಅಡಿಯಲ್ಲಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ

**ಬೆಂಗಳೂರು, ಡಿಸೆಂಬರ್ 15 (ಕರ್ನಾಟಕ ವಾರ್ತೆ) :**

ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 12(1)(ಸಿ) ಅಡಿಯಲ್ಲಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ 2012–13ನೇ ಸಾಲಿನಿಂದ ಶೇಕಡಾ 25 ರಷ್ಟು ವಿದ್ಯಾರ್ಥಿಗಳಿಗೆ ಉಚಿತವಾಗಿ ಸೀಟು ಹಂಚಿಕೆ ಮಾಡಿ, ಆರ್.ಟಿ.ಇ. ಕಾಯ್ದೆ 2009ರ ಸೆಕ್ಷನ್ 12(2) ರಡಿಯಲ್ಲಿ ಸರ್ಕಾರದಿಂದ ಖಾಸಗಿ ಅನುದಾನರಹಿತ ಶಾಲೆಗಳಿಗೆ ಶುಲ್ಕ ಮರುಪಾವತಿಯನ್ನು ಮಾಡಲಾಗುತ್ತಿದೆ.

2020–21ನೇ ಸಾಲಿನಲ್ಲಿ ಆರ್.ಟಿ.ಇ. ಶುಲ್ಕ ಮರುಪಾವತಿಗೆ ಆಯವ್ಯಯದಲ್ಲಿ ರೂ. 550 ಕೋಟಿ ಮಂಜೂರಾಗಿದ್ದು, 1ನೇ ಡಿಸಂಬರ್ 2020ರವರೆಗೆ ಬಿಡುಗಡೆಯಾಗಿದ್ದ 412.50 ಕೋಟಿಗಳನ್ನು ಎಲ್ಲಾ ಜಿಲ್ಲೆಗಳಿಗೆ ಬಿಡುಗಡೆ ಮಾಡಿ ಆ ಮೂಲಕ ಸಂಬಂಧಿಸಿದ ಖಾಸಗಿ ಅನುದಾನರಹಿತ ಶಾಲೆಗಳಿಗೆ ಶುಲ್ಕ ಮರುಪಾವತಿಯನ್ನು ಮಾಡಲಾಗಿದೆ. ಅಂತಿಮ ಕಂತು ರೂ. 137.50 ಕೋಟಿಗಳು ದಿನಾಂಕ : 10–12–2020 ರಂದು ಸರ್ಕಾರದಿಂದ ಬಿಡುಗಡೆಯಾಗಿದ್ದು ದಿನಾಂಕ : 11–12–2020 ರಂದು ಈಗಾಗಲೇ ಜಿಲ್ಲೆಗಳಿಗೆ ಹಂಚಿಕೆ ಮಾಡಿ ಕೂಡಲೇ ಅರ್ಹ ಅನುದಾನರಹಿತ ಶಾಲೆಗಳಿಗೆ ಪಾವತಿಸುವಂತೆ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಚನೆ ನೀಡಲಾಗಿದೆ. ಈ ಮೂಲಕ 2019–20ನೇ ಸಾಲಿನ ಸಂಪೂರ್ಣ ಶುಲ್ಕ ಮರುಪಾವತಿಯನ್ನು ಮಾಡಲಾಗುವುದು.

| ಅನುದಾನ ಬಿಡುಗಡೆ ಮತ್ತು ವೆಚ್ಚದ ವಿವರ 2020–21 (ರೂ. ಕೋಟಿಗಳಲ್ಲಿ) | | | |
|---|---|---|---|
| ವಿವರ | 1&2ನೇ ಕಂತು 05–06–2020 | 3ನೇ ಕಂತು 28–09–2020 | 4ನೇ ಕಂತು 10–12–2020 |
| ಬಿಡುಗಡೆ | 275.00 | 137.50 | 137.50 |
| ವೆಚ್ಚ | 275.00 | 137.28 | – |
| ಶೇ. ವೆಚ್ಚ | 100% | 99.84% | ದಿನಾಂಕ : 11–12–2020 ರಂದು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ. |

## Fee reimbursement of students of children admitted under section 12(1)(c) of RTE Act 2009, in private unaided institutions

Bengaluru, December 15 (Karnataka Information)

As per section 12(1)(c) of RTE Act 2009, 25% seats in private unaided institutions are allotted by government since 2012-13 and the fee reimbursement is being made as per section 12(2) of RTE Act 2009.

A budget of Rs. 550 crore has been allocated during 2020-21 for the fee reimbursement to the private unaided institutions . An amount of Rs. 412.50 crore was released from the government till 1st December 2020 and the same is completely reimbursed to the private unaided institutions. The final installement of Rs. 137.50 crore has been received on 10-12-2020 from the government, and the same has been released to all the districts with an instruction to immidietly release it to the eligible private unaided institutions. The reimbursement pending for 2019-20 will be completed with this releases.

| Fund released and expenditure details for 2020-21 ( Rs.in crores) | | | |
|---|---|---|---|
| **Details** | **1&2nd Installments 05-06-2020** | **3rd Installment 28-09-2020** | **4th Installment 10-12-2020** |
| Releases | 275.00 | 137.50 | 137.50 |
| Expenditures | 275.00 | 137.28 | - |
| % Progress | 100% | 99.84% | The fund is released to districts on : 11-12-2020 |

## Karnataka State Pollution Control Board
## ParisaraBhavan, Bengaluru
## AQI of the CAAQM stations established in Bengaluru City
## Date :15.12.2020

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 107 | Moderate | $PM_{10}$ |
| 2 | Jayanagar 5th Block, Shalini ground | 101 | Moderate | $PM_{2.5}$ |
| 3 | KAVIKA, Mysore Road | 109 | Moderate | $PM_{10}$ |

| | | | | |
|---|---|---|---|---|
| 4 | Rajeev Gandhi Institute of Chest Disease, NIMHANS, Hombegowda Nagar | 113 | Moderate | $PM_{10}$ |
| 5 | HSR Layout, near Central Silkboard | 89 | Satisfactory | $PM_{2.5}$ |
| 6 | City Railway Station, Magestic, Bengaluru | 62 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 38 | Good | CO |
| 8 | BWSSB, Kadabesanahalli | 98 | Satisfactory | $PM_{2.5}$ |
| 9 | Peenya | 107 | Moderate | $O_3$ |
| 10 | BTM Layout | * | * | * |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 15.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 107 | ಸಾಧಾರಣ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 101 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 109 | ಸಾಧಾರಣ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 113 | ಸಾಧಾರಣ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೋರಮಂಗಲ ಮಂಡಳಿ ಹತ್ತಿರ | 89 | ತೃಪ್ತಿಕರ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 62 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 38 | ಉತ್ತಮ | CO |
| 8 | BWSSB, ಕಾಡಬೀಸನಹಳ್ಳಿ | 98 | ತೃಪ್ತಿಕರ | $PM_{2.5}$ |
| 9 | ಪೀಣ್ಯ | 107 | ಸಾಧಾರಣ | $O_3$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |